# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ದೂರವಾಣಿ; 0816-225596, 0816-2255597, 0816-2255597 ಫ್ಯಾಕ್ಸ್ ; 0816-2270719

ಸಂಖ್ಯೆ:ತುವಿ:ಶೈವಿ:UG-ADM:2021-22: 1182 ದಿನಾಂಕ:24.08.2021

## ಸ್ನಾತಕ ಪ್ರವೇಶಾತಿ ಅಧಿಸೂಚನೆ 2021-22

**ವಿಷಯ:** 2021-22ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿ ಕೋರ್ಸುಗಳ ಪ್ರವೇಶಾತಿ ಕುರಿತು.

**ಉಲ್ಲೇಖ** : 1) ಕಾಲೇಜು ಶಿಕ್ಷಣ ಆಯುಕ್ತರು, ಇವರ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/45/ಪ್ರವೇಶಾತಿ ಮಾರ್ಗಸೂಚಿ/2021-22 ದಿನಾಂಕ: 21.08.2021

2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 24.08.2021

(ಪುಟ ಸಂಖ್ಯೆ: 04 ಕಂಡಿಕೆ ಸಂಖ್ಯೆ: 14)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿ ಸೂಚಿಸಿದಂತೆ, 2021-22ನೇ ಸಾಲಿನಲ್ಲಿ ಒಂದನೇ, ಮೂರನೇ ಮತ್ತು ಐದನೇ ಸೆಮಿಸ್ಟರ್‌ಗಳ ಪದವಿ ತರಗತಿಗಳ ಪ್ರವೇಶಾತಿಯನ್ನು ದಿನಾಂಕ:**24.08.2021** ರಿಂದ ಪ್ರಾರಂಭಿಸಲು ತಿಳಿಸಿದೆ. ವಿಶ್ವವಿದ್ಯಾನಿಲಯದ ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳಲ್ಲಿ ಪ್ರವೇಶಾತಿ ಸಮಿತಿಯನ್ನು ರಚಿಸಿಕೊಂಡು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ help desk ಗಳನ್ನು ಸ್ಥಾಪಿಸಿ, UUCMS ಅಡಿಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯ (NEP) ಅನ್ವಯ ನಾಲ್ಕು ವರ್ಷಗಳ ಪದವಿ ಕಾರ್ಯಕ್ರಮಗಳಿಗೆ ಪ್ರವೇಶಾತಿ ಪ್ರಕ್ರಿಯೆಯನ್ನು ನಿರ್ವಹಿಸಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

| | |
|---|---|
| ಅರ್ಜಿ ಸಲ್ಲಿಸಲು ಪ್ರಾರಂಭ | 24.08.2021 |
| ಪ್ರವೇಶಾತಿ ಪ್ರಕ್ರಿಯೆಯ ಕೊನೆಯ ದಿನಾಂಕ | 30.09.2021 |
| ತರಗತಿ ಪ್ರಾರಂಭ | 01.10.2021 |
| ಪ್ರವೇಶ ಪಟ್ಟಿಗಳನ್ನು ತ್ರಿಪ್ರತಿಗಳಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 30.10.2021 |

ಈ ಅಧಿಸೂಚನೆಯಲ್ಲಿ ನಮೂದಿಸಿರುವ ದಿನಾಂಕಗಳೊಳಗಾಗಿ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಆಯಾಯ ಕೋರ್ಸುಗಳಿಗೆ ನಿಯಮಾನುಸಾರ ಪ್ರವೇಶ ಮಾಡಿಕೊಳ್ಳತಕ್ಕದ್ದು.

**ವಿಶೇಷ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು:-**

1. **2021-22ನೇ ಶೈಕ್ಷಣಿಕ ಸಾಲಿನ ವಿಶ್ವವಿದ್ಯಾನಿಲಯದ ಸಂಯೋಜನಾ ಮಾನ್ಯತೆಯ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು 2020-21ನೇ ಶೈಕ್ಷಣಿಕ ಸಾಲಿನಲ್ಲಿ ಮಾನ್ಯತೆ ಹೊಂದಿದ ಕೋರ್ಸುಗಳಿಗೆ/ಪ್ರವೇಶ ಮಿತಿಗೆ ಮಾತ್ರ 2021-22ನೇ ಸಾಲಿಗೆ ಪ್ರವೇಶಾತಿ ಮಾಡಿಕೊಳ್ಳುವುದು.**
2. **2021-22ನೇ ಸಾಲಿನ ಸಂಯೋಜನೆ ಪ್ರಸ್ತಾವನೆಯಲ್ಲಿ ಹೊಸ ಕಾಲೇಜು/ಹೊಸ ಕೋರ್ಸುಗಳಿಗೆ/ಪ್ರವೇಶ ಮಿತಿ ಹೆಚ್ಚಳಿಕೆ ಕುರಿತಂತೆ ನಿಯಮಾನುಸಾರ ವಿಶ್ವವಿದ್ಯಾನಿಲಯದಿಂದ ಸಂಯೋಜನಾ ಮಾನ್ಯತೆ ಮಂಜೂರಾಗದ ಹೊರತು ಪ್ರವೇಶ ಮಾಡಿಕೊಳ್ಳುವಂತಿಲ್ಲ.**
3. 2021-22 ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಸಂಬಂಧ ಸರ್ಕಾರ/ಯುಜಿಸಿಯಿಂದ ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿ/ಆದೇಶಗಳನ್ನು ಅನುಸರಿಸುವ ಕುರಿತು ಆಗಾಗ್ಗೆ ತಿಳಿಸಲಾಗುವುದು.
4. ಇನ್ನುಳಿದಂತೆ ಯು.ಜಿ.ಸಿ/ಎಂಹೆಚ್ಎ/ ಸರ್ಕಾರ ಹೊರಡಿಸುವ ಮಾರ್ಗಸೂಚಿಯನ್ವಯ 2021-22ರ ಶೈಕ್ಷಣಿಕ ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ಅಧಿಸೂಚಿಸಲಾಗುವುದು.
5. ಬಿ.ಎ. ಹಾಗೂ ಬಿ.ಎಸ್ಸಿ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿ ಎರಡು ವಿಷಯಗಳನ್ನು ಮುಖ್ಯವಿಷಯಗಳಾಗಿ ಹಾಗೂ ಇವರೆಡು ವಿಷಯಗಳಿಗೆ ಹೊರತಾದ ಒಂದು ವಿಷಯದಲ್ಲಿ ಮುಕ್ತ ಆಯ್ಕೆ ಪತ್ರಿಕೆಯನ್ನು ಆಯ್ದುಕೊಳ್ಳಬೇಕು. ಆದರೆ ಪ್ರವೇಶಾತಿಯನ್ನು ಎರಡು ಮುಖ್ಯ ವಿಷಯಗಳಿಗೆ ಮಾಡಿಕೊಳ್ಳಬೇಕು.
6. ಒಂದೇ ವಿಷಯದ ಮೇಲೆ ಕೇಂದ್ರಿಕೃತವಾದ ಬಿ.ಕಾಂ. ಇತ್ಯಾದಿ ಕಾರ್ಯಕ್ರಮಗಳಿಗೆ ಸಂಬಂಧಪಟ್ಟ ಒಂದೇ ವಿಷಯಕ್ಕೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು.

7. ಕನ್ನಡ ಭಾಷಾ ಕಲಿಕೆ ಕಡ್ಡಾಯವಾಗಿದ್ದು ಹೊರರಾಜ್ಯದ/ ಪದವಿಪೂರ್ವದಲ್ಲಿ ಕನ್ನಡ ಕಲಿಯದ ವಿದ್ಯಾರ್ಥಿಗಳಿಗೆ ಫಂಕ್ಷನಲ್ ಕನ್ನಡ ಕಡ್ಡಾಯವಾಗಿದೆ. ಉಳಿದಂತೆ ಇನ್ನಿತರೆ ಪತ್ರಿಕೆಗಳನ್ನು ವಿಶ್ವವಿದ್ಯಾನಿಲಯ ಅನುಮೋದಿಸುವ 4 ವರ್ಷಗಳ ಪದವಿ ಕಾರ್ಯಕ್ರಮಗಳ ಚೌಕಟ್ಟಿಗೆ ಅನುಗುಣವಾಗಿ ಕೊಡಬೇಕು.
8. ಕಾಲೇಜಿನ ಅನುಮೋದಿತ ಪ್ರವೇಶಮಿತಿಯೊಳಗೆ ಎಲ್ಲಾ ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳಬೇಕು. ಕಾಲೇಜಿನ ಅನುಮೋದಿತ ಪ್ರವೇಶಮಿತಿಯೊಳಗೆ ಎಲ್ಲಾ ವಿಷಯಗಳ ಪ್ರವೇಶಮಿತಿಯನ್ನು ನಿಗದಿಪಡಿಸಿಕೊಂಡು ನಿಯಮಗಳಿಗನುಸಾರವಾಗಿ ವಿಷಯವಾರು ಪ್ರವೇಶಾತಿ ಮಾಡಿಕೊಳ್ಳಬೇಕು.

ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು:-

1. ಕೋವಿಡ್-19 (ಕೊರೊನಾ ವೈರಸ್) ನಿಯಂತ್ರಿಸುವ ಪ್ರಯುಕ್ತ ವಿದ್ಯಾರ್ಥಿಗಳು/ಪೋಷಕರು ಪ್ರವೇಶಾತಿ ಸಂದರ್ಭದಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು, ಮಾಸ್ಕ್ ಮತ್ತು ಸ್ಯಾನಿಟೈಸರ್ ಕಡ್ಡಾಯವಾಗಿ ಬಳಸುವ ಬಗ್ಗೆ ಅರಿವು ಮೂಡಿಸುವುದು.
2. ಎರಡು ವರ್ಷಗಳ ಪಿ.ಯು.ಸಿ. ಕೋರ್ಸು ಅಥವಾ ತತ್ಸಮಾನ ಕೋರ್ಸನ್ನು ಪೂರ್ಣಗೊಳಿಸದ (10+02) ಯಾವುದೇ ವಿದ್ಯಾರ್ಥಿಯು ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ಪಡೆಯಲು ಅರ್ಹನಲ್ಲ.
3. ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿನಿಯಮಕ್ಕನುಗುಣವಾಗಿ ಹಾಗೂ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ವಯ ಮಾಡಿಕೊಳ್ಳುವುದು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ಅಥವಾ ಸಂಸ್ಥೆಯ ಮುಖ್ಯಸ್ಥರ ಪೂರ್ಣ ಜವಾಬ್ದಾರಿಯಾಗಿರುತ್ತದೆ ಮತ್ತು ನಿಯಮಗಳಿಗೆ ವಿರುದ್ಧವಾಗಿ ಮಾಡಿಕೊಳ್ಳಲಾಗುವ ಪ್ರವೇಶಾತಿಯು ಅಮಾನ್ಯವಾಗುತ್ತದೆ.
4. ಹೊರ ರಾಜ್ಯದಲ್ಲಿ ದ್ವಿತೀಯ ಪಿ.ಯು.ಸಿ. ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಹತಾ ಪ್ರಮಾಣ ಪತ್ರಕ್ಕಾಗಿ ನಿಗದಿತ ನಮೂನೆಯೊಂದಿಗೆ ಅಂಕಪಟ್ಟಿಗಳು, ಕ್ಯುಮ್ಯೂಲೇಟಿವ್ ರೆಕಾರ್ಡ್ ಹಾಗೂ ಇತರೆ ಅವಶ್ಯ ದಾಖಲಾತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸುವುದು. ಅರ್ಹತಾ ಪ್ರಮಾಣ ಪತ್ರ ಒದಗಿಸದ ಹೊರ ರಾಜ್ಯದ ವಿದ್ಯಾರ್ಥಿಗಳನ್ನು ಯಾವುದೇ ಕಾರಣಕ್ಕೂ ಪ್ರವೇಶಾತಿ ಮಾಡಿಕೊಳ್ಳತಕ್ಕದಲ್ಲ.
   ಹೊರ ದೇಶಗಳ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳುವಾಗ ಈ ಕೆಳಕಂಡ ದಾಖಲಾತಿಗಳನ್ನು ಪಡೆಯತಕ್ಕದ್ದು.
   a. ಅರ್ಹತಾ ಪ್ರಮಾಣ ಪತ್ರ
   b. ವಿದ್ಯಾರ್ಥಿಯ ವೀಸಾ
   c. ಸಕ್ಷಮ ಪ್ರಾಧಿಕಾರವು ನೀಡಿರುವ **A.I.D.S.** ಮುಕ್ತ ಪ್ರಮಾಣ ಪತ್ರ
5. ವಿಶ್ವವಿದ್ಯಾನಿಲಯ/ರಾಜ್ಯ ಸರ್ಕಾರವು ನಿಗದಿಪಡಿಸಿರುವ ಪ್ರವೇಶಮಿತಿಗಿಂತ ಹೆಚ್ಚಾಗಿ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ಮಾಡಿಕೊಂಡಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ರ ಪ್ರಕರಣ 59(18) ರನ್ವಯ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.
6. ವಿದ್ಯಾರ್ಥಿಯು ಪ್ರವೇಶ ಪಡೆದಿರುವ ಕೋರ್ಸಿಗೆ ಸಂಬಂಧಿಸಿದ ವಿನಿಯಮ, ಕನಿಷ್ಠ ಹಾಜರಾತಿ ಮತ್ತು ಪರೀಕ್ಷಾ ಸ್ವರೂಪವನ್ನು ಪ್ರತೀ ವರ್ಷ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು ಹಾಗೂ ಅನುಸರಣಾ ವರದಿಯನ್ನು ಪ್ರವೇಶ ಪಟ್ಟಿಯೊಂದಿಗೆ ಸಲ್ಲಿಸುವುದು.
7. ವಿಶ್ವವಿದ್ಯಾನಿಲಯದಿಂದ ಪೂರ್ವಾನುಮತಿ ಪಡೆಯದೇ ಯಾವುದೇ ವರ್ಗಾವಣೆ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದಲ್ಲ.
8. ಕಾಲೇಜುಗಳು ಆಯಾ ವರ್ಷಗಳಲ್ಲಿ ನಿಗದಿಪಡಿಸುವ ಕೊನೆಯ ದಿನಾಂಕದೊಳಗೆ ಎಲ್ಲಾ ಪ್ರವೇಶಾತಿಗಳನ್ನು ಮಾಡಿಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಂಡಲ್ಲಿ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.
9. ಪ್ರಾಂಶುಪಾಲರು/ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಶುಲ್ಕ ಪಾವತಿಯ ಮೂಲ ರಶೀದಿಯೊಂದಿಗೆ ತ್ರಿಪ್ರತಿಗಳಲ್ಲಿ ದಿನಾಂಕ:**30.10.2021** ರೊಳಗೆ ಮಾನ್ಯ ಕುಲಸಚಿವರು / ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸುವುದು. ಕಾಲೇಜಿನ ಅಧಿಕಾರಿಗಳು ಶೈಕ್ಷಣಿಕ ವಿಭಾಗಕ್ಕೆ ನಿಗದಿತ ದಿನಾಂಕದಂದು ಎಲ್ಲಾ ಅವಶ್ಯ ದಾಖಲಾತಿಗಳನ್ನು ಒದಗಿಸುವುದು. ಪ್ರಾಂಶುಪಾಲರು/ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಎಲ್ಲಾ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿಶ್ವವಿದ್ಯಾನಿಲಯದ ವಿನಿಯಮಗಳಿಗನುಗುಣವಾಗಿ ಮಾಡಿಕೊಳ್ಳಲಾಗಿದೆ ಎಂದು ದೃಢೀಕರಿಸುವುದು ಹಾಗೂ ಅನುಸರಣಾ ವರದಿಯನ್ನು ಅಧಿಸೂಚನೆಯ ಪ್ರಕರಣ **06** ರನ್ವಯ ಸಲ್ಲಿಸುವುದು.
10. ಹೊರ ರಾಜ್ಯದಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳ ಪ್ರವೇಶಾತಿ ಪಟ್ಟಿಯನ್ನು ಅರ್ಹತಾ ಪ್ರಮಾಣ ಪತ್ರ ಹಾಗೂ ಇತರೆ ಅಗತ್ಯ ದಾಖಲಾತಿಗಳೊಂದಿಗೆ ಪ್ರತ್ಯೇಕವಾಗಿ ಸಲ್ಲಿಸತಕ್ಕದ್ದು. ಇಂತಹ ವಿದ್ಯಾರ್ಥಿಗಳ ಕ್ರಮ ಸಂಖ್ಯೆಯನ್ನು ಕರ್ನಾಟಕದೊಳಗೆ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳ ನಂತರ ನಿರಂತರವಾಗಿ ನೀಡತಕ್ಕದ್ದು.

11. ಕಾಲೇಜು ಬದಲಾವಣೆ/ಮರು ಪ್ರವೇಶ/ವರ್ಗಾವಣೆ ಪ್ರವೇಶ ಬಯಸುವ ವಿದ್ಯಾರ್ಥಿಗಳು ನಿಗದಿತ ನಮೂನೆಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಅರ್ಜಿ ಸಲ್ಲಿಸಿ, ವಿಶ್ವವಿದ್ಯಾನಿಲಯದ ಅನುಮತಿ ಪಡೆದ ನಂತರ ಪ್ರಾಂಶುಪಾಲರು ತಮ್ಮ ಕಾಲೇಜುಗಳಲ್ಲಿ ಪ್ರವೇಶಾತಿ ಮಾಡಿಕೊಳ್ಳುವುದು.
12. ಶೈಕ್ಷಣಿಕ ವೇಳಾಪಟ್ಟಿಯನ್ನು ಎಲ್ಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರುವುದು.
13. ಶೈಕ್ಷಣಿಕ ವೇಳಾಪಟ್ಟಿಯಲ್ಲಿನ ಯಾವುದೇ ದಿನಾಂಕವು ರಜಾ ದಿನವೆಂದು ಘೋಷಿಸಲ್ಪಟ್ಟಲ್ಲಿ ಕಾರ್ಯಕ್ರಮಗಳು ಸದರಿ ದಿನಾಂಕದ ನಂತರದ ಕರ್ತವ್ಯದ ದಿನ ಪ್ರಾರಂಭಗೊಳ್ಳುತ್ತದೆ.
14. ಪ್ರವೇಶಾತಿ ಪಟ್ಟಿಯನ್ನು ತಡವಾಗಿ ಸಲ್ಲಿಸುವುದು ವಿಶ್ವವಿದ್ಯಾನಿಲಯವು ನಿಗದಿಪಡಿಸುವ ದಂಡನೆಗೆ ಒಳಪಟ್ಟಿರುತ್ತದೆ.

| ಕರಡು ಪತ್ರವು ಮಾನ್ಯಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ. |
|---|

ಆದೇಶದ ಮೇರೆಗೆ

ಉಪಕುಲಸಚಿವರು

ಗೆ,

1) **ಪ್ರಾಂಶುಪಾಲರು, ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.**- (ವಿಶ್ವವಿದ್ಯಾನಿಲಯದ ಮಾರ್ಗಸೂಚಿಯನ್ನು ಅನುಸರಿಸುವುದು)
2) **ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.**

<u>ಪ್ರತಿಗಳು:</u>

1. ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಕುಲಸಚಿವರು, ಮೈಸೂರು/ಬೆಂಗಳೂರು/ಕರ್ನಾಟಕ/ಕುವೆಂಪು/ಮಂಗಳೂರು/ದಾವಣಗೆರೆ/ಕರ್ನಾಟಕ ಮಹಿಳಾ ವಿಶ್ವವಿದ್ಯಾನಿಲಯ.
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಡೀನರು, ಕಲಾ, ವಿಜ್ಞಾನ, ವಾಣಿಜ್ಯ ಮತ್ತು ಶಿಕ್ಷಣ ನಿಕಾಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
6. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಮುಖ್ಯಸ್ಥರು, ಐ.ಎಫ್.ಎ. ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಎನ್.ಎಸ್.ಎಸ್. ಕೋ-ಆರ್ಡಿನೇಟರ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
10. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
11. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. – **ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಪ್ರಾಂಶುಪಾಲರಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.**
12. ಕಚೇರಿ ಪ್ರತಿ.